ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ : 22 JUL 2021

## ಅಧಿಸೂಚನೆ

**ವಿಷಯ:** ಕವಿಮಂ ನೌಕರರ ಸೇವಾ ನಿಯಮಾವಳಿಗಳಿಗೆ ತಿದ್ದುಪಡಿ ಬಗ್ಗೆ.
**ಉಲ್ಲೇಖ:** ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ 8(ಇ) ಸೇನಿಸೇ 2020 ದಿನಾಂಕ: 22.06.2021.

***

ನಿಗಮದಲ್ಲಿ ಕರ್ತವ್ಯವನ್ನು ನಿರ್ವಹಿಸುತ್ತಿರುವ ಕೆಲವು ನೌಕರರು ಕ್ಯಾನ್ಸರ್ ಕಾಯಿಲೆಗೆ ಸಂಬಂಧಿಸಿದಂತೆ ವೈದ್ಯರ ಸಲಹೆಯ ಮೇರೆಗೆ ಕಿಮೋ/ರೇಡಿಯೋ ಥೆರಪಿಯಂತಹ ಚಿಕಿತ್ಸೆಗೆ ಒಳಪಡಬೇಕಿದ್ದು, ಆ ನಿಮಿತ್ತವಾಗಿ ಕಡ್ಡಾಯವಾಗಿ ವಿಶ್ರಾಂತಿಯನ್ನು ಪಡೆಯಬೇಕಿರುವ ಅವಶ್ಯಕತೆಯಿರುತ್ತದೆ. ಈ ನಿಮಿತ್ತವಾಗಿ ಪಡೆಯುವ ಚಿಕಿತ್ಸೆ ಮತ್ತು ವಿಶ್ರಾಂತಿಯ ಅಗತ್ಯತೆಯಿಂದಾಗಿ ಕಚೇರಿಗೆ ಹಾಜರಾಗಲು ಕಷ್ಟ ಸಾಧ್ಯವಾದ್ದರಿಂದ, ಈ ನಿಮಿತ್ತದ ಅವಧಿಯನ್ನು ಸಕ್ಷಮ ವೈದ್ಯಕೀಯ ಪ್ರಾಧಿಕಾರವು ನೀಡುವ ಪ್ರಮಾಣ ಪತ್ರವನ್ನು ಹಾಜರುಪಡಿಸುವ ಷರತ್ತಿಗೊಳಪಟ್ಟು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅನುಬಂಧ-ಬಿ ರಲ್ಲಿ ನಿಯಮ 11(ಜೆ) ಎಂಬ ನಿಯಮವನ್ನು ಹೊಸದಾಗಿ ಸೇರ್ಪಡೆಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ.

ಆದ್ದರಿಂದ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಸದರಿ ನಿಬಂಧನೆಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರ ಸೇವಾ ನಿಯಮಗಳಲ್ಲಿ ಈ ಕೆಳಕಂಡಂತೆ ಅಳವಡಿಸಿಕೊಳ್ಳಲು ಇಚ್ಛಿಸುತ್ತದೆ:

1. **ಶೀರ್ಷಿಕೆ ಮತ್ತು ಆರಂಭ:**

ಅ) ಈ ನಿಯಮಗಳನ್ನು ಕವಿಪ್ರನಿನಿ ನೌಕರರ ಸೇವಾ ನಿಯಮಗಳು(ತಿದ್ದುಪಡಿ), 2021 ಎಂದು ಕರೆಯತಕ್ಕದ್ದು.
ಆ) ಈ ತಿದ್ದುಪಡಿಯು, ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

2. **ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರ ಸೇವಾ ನಿಯಮಗಳ ಅಪೆಂಡಿಕ್ಸ್-8, ಭಾಗ-1 ರ ಅಡಿಯಲ್ಲಿ ಹೊಸದಾಗಿ ಸೇರ್ಪಡೆ:**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರ ಸೇವಾ ನಿಯಮಗಳ ಅಪೆಂಡಿಕ್ಸ್-8, ಭಾಗ-1 ರ ಅಡಿಯಲ್ಲಿ ಕ್ರಮ ಸಂಖ್ಯೆ: 10(ಎಫ್) ರ ನಂತರ **ಕ್ರಮ ಸಂಖ್ಯೆ: 10(ಜಿ)** ನ್ನು ಈ ಕೆಳಕಂಡಂತೆ ಹೊಸದಾಗಿ ಸೇರ್ಪಡೆ ಮಾಡಿಕೊಳ್ಳಲಾಗಿದೆ:

**"10–ಜಿ:** ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿದ್ದು ಚಿಕಿತ್ಸಾ ತಜ್ಞರು ರೂಪಿಸುವ ಯೋಜನೆಯನುಸಾರ ಪಡೆಯುವ ಕಿಮೋ/ರೇಡಿಯೋ ಥೆರಪಿ ಚಿಕಿತ್ಸೆ ಮತ್ತು ಸಂಬಂಧದಲ್ಲಿ ಅಗತ್ಯವಾಗುವ ವಿಶ್ರಾಂತಿಯ ಅವಧಿಯ ದಿನಗಳಿಗೆ ಸಕ್ಷಮ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದು ಒದಗಿಸುವ ಷರತ್ತಿಗೊಳಪಟ್ಟು, ಈ ಚಿಕಿತ್ಸೆಯ ಅವಧಿಯಲ್ಲಿ ಮಾತ್ರ ಗರಿಷ್ಟ ಆರು ತಿಂಗಳುಗಳ ಮಿತಿಗೊಳಪಟ್ಟು ವಿಶೇಷ ಸಾಂದರ್ಭಿಕ ರಜೆಯನ್ನು ಅನುಮತಿಸತಕ್ಕದ್ದು."

ಆದೇಶದ ಮೇರೆಗೆ,

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು 0(ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in/ for information of:
6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.